ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಃ ನ್ಯಾಯಾಲಯ, ಮದ್ದೂರು

ಅಸಲು ದಾವಾ ನಂ.307/2020 ಪಿಡಬ್ಲ್ಯೂ-3

ದಿನಾಂಕಃ-24-09-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ-ವಾದಿಯ ಪರ ಮಾನ್ಯ ಶ್ರೀ.ಕೆಸಿಕೆ ವಕೀಲರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದು, ಪ್ರಮಾಣ ಪತ್ರಿಕೆಯಲ್ಲಿ ಬರೆಸಿರುವ ವಿಷಯಗಳೆಲ್ಲವೂ ಸತ್ಯವಾಗಿದೆ. ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿದ್ದೇನೆ.

ದಿ 05-09-2017 ರಂದು ಆಗಿರುವ ಕ್ರಯದ ಕರಾರು ಪತ್ರದಲ್ಲಿ ನಾನು ಸಾಕ್ಷಿದಾರನಾಗಿ ಸಹಿ ಮಾಡಿರುತ್ತೇನೆ. ಅದರಲ್ಲಿನ ಸಾಕ್ಷಿಯ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗ ನಿಪಿ-1 ಇ ಎಂದು ಗುರುತಿಸಲಾಯಿತು. ಸದರಿ ಪತ್ರಕ್ಕೆ ತನ್ನ ಜೊತೆ ಮುತ್ತಲಿಂಗ ರವರು ಸಾಕ್ಷಿಯಾಗಿ ಸಹಿ ಮಾಡಿರುತ್ತಾರೆ. ವಾದಿಗೆ ಪ್ರತಿವಾದಿಗಳು ಕ್ರಯಪತ್ರವನ್ನು ಬರೆದುಕೊಟ್ಟಿರುತ್ತಾರೆ.

**ಈ ಹಂತದಲ್ಲಿ ಪ್ರತಿವಾದಿಯ ಪರ ವಕೀಲರು ಪಾಟೀಸವಾಲಿಗೆ ಸಮಾಯವಕಾಶ ಕೋರಿದ್ದು, ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸರಿಯಾಗಿದೆಂದು ಒಪ್ಪಿರುತ್ತಾರೆ

ಎರಡನೇ ಅಪರ ಸಿವಿಲ್ ಮತ್ತು ಜೆಎಂಎಫ್,ಸಿ,
ನ್ಯಾಯಾಧೀಶರು, ಮದ್ದೂರು.

ಸಾಕ್ಷಿಯ ಸಹಿಃ